<u>3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,ರವರ ನ್ಯಾಯಾಲಯ, ಕಡೂರು</u>

**ಸಿ.ಸಿ.ನಂ.454/2019**

**ದಿನಾಂಕಃ30.08.2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

ಪಿ.ಡಬ್ಲ್ಯುಃ3 ಸಿ.ಡಬ್ಲ್ಯುಃ4

ಸಾಕ್ಷಿಯ ಹೆಸರು : ಸಗುನಪ್ಪ
ತಂದೆಯ ಹೆಸರು : ಗೋವಿಂದಪ್ಪ
ವಯಸ್ಸು : 69 ವರ್ಷ
ಉದ್ಯೋಗ : ವ್ಯವಸಾಯ
ವಾಸ : ದೋಗೇಹಳ್ಳಿ

**<u>ಮುಖ್ಯ ವಿಚಾರಣೆಃ ಮಾನ್ಯ ಹಿ ಸ ಸ ಅ ರವರಿಂದಃ</u>**

ನಿಪಿ-10 ದಾಖಲೆಯಲ್ಲಿ ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-10(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2-3 ವರ್ಷಗಳ ಹಿಂದೆ ಮಾಡಿರುತ್ತೇನೆ,ದ ಆದರೆ ಎಲ್ಲಿ ಮಾಡಿರುತ್ತೇನೆ ನನಗೆ ನೆನಪಿಲ್ಲ. ನಿಪಿ-10 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ. ನಿಪಿ-11 ರ ಛಾಯಾಚಿತ್ರದಲ್ಲಿ ನಾನು ಇದ್ದೇನೆ ಅದನ್ನು ಎಲ್ಲಿ ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾನು ತುಮಕೂರಿನಲ್ಲಿ ಪೋಲೀಸರೊಂದಿಗೆ ಯಾವುದೇ ಸಹಿ ಮಾಡಿರುವುದಿಲ್ಲ ಅಂದರೆ ಸರಿ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ರವರು ಅನುಮತಿ ಕೋರಿದ್ದು ಸಾಕ್ಷಿಯ ಹೇಳಿಕೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು. )**

**<u>ಪಾಟೀ ಸವಾಲುಃ ಮಾನ್ಯ ಹಿಸಸಅ ಅವರಿಂದಃ</u>**

ದಿಃ15.08.2015 ರಂದು ಸಂಜೆ 5.30 ಗಂಟೆಗೆ ಪೋಲೀಸರು ನನ್ನನ್ನು ತುಮಕೂರಿನ ದ್ವಾರಕ ರೆಸಿಡೆನ್ಸಿಗೆ ಕರೆದುಕೊಂಡು ಹೋಗಿರುತ್ತಾರೆ ಅಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು, ಚಾಸಾ-1,3 ರವರು ಹಾಗೂ ಪೋಲೀಸರು ಇದ್ದರು ಅಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-1 ರವರು ನಮ್ಮನ್ನು ದ್ವಾರಕ ರೆಸಿಡೆನ್ಸಿಯ 108 ನೇ ಕೊಠಡಿಗೆ ಕರೆದುಕೊಂಡು ಹೋಗಿ ಸದರಿ ಕೊಠಡಿಯಲ್ಲಿ ಆರೋಪಿತರು ಚಾಸಾ-1 ರವರಿಂದ ರೂ.20,00,000/-ಗಳನ್ನು ಪಡೆದುಕೊಂಡು ಮೋಸ ಮಾಡಿರುತ್ತಾರೆ ಎಂದು

ಮಹಜರ್ ಕ್ರಮ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-11 ರಿಂದ 13 ರ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.</u>**

**ಮರು ವಿಚಾರಣೆಃ ಇರುವುದಿಲ್ಲ.**

**(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ದೀಪು ಎಂ.ಟಿ.)
3 ನೇ.ಹೆ.ಪ್ರಃದಃನ್ಯಾಃದಂ.,ರವರು, ಕಡೂರು.